**ಕರ್ನಾಟಕ ಸರ್ಕಾರ**

ಸಂಖ್ಯೆ: ಡಿಟಿಇ/62/ಇಎಸ್‌ಟಿ(6)/2016

ಆಯುಕ್ತರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ತಾಂತ್ರಿಕ ಶಿಕ್ಷಣ ಭವನ
ಅರಮನೆ ರಸ್ತೆ, ಬೆಂಗಳೂರು-01
ದಿನಾಂಕ:16.10.2020

**ಸುತ್ತೋಲೆ**

**ವಿಷಯ:-** ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಸಂಸ್ಥೆಗಳಲ್ಲಿ ಭದ್ರತಾ ಸಿಬ್ಬಂದಿ ಸೇವೆ ಪಡೆಯಲು ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಕರೆದಿರುವ ಟೆಂಡರ್‌ನ ಇ.ಎಂ.ಡಿ ಹಿಂತಿರುಗಿಸುವ ಬಗ್ಗೆ.

*******

ತಾಂತ್ರಿಕ ಶಿಕ್ಷಣ ಇಲಾಖೆ ಅಧೀನದಲ್ಲಿರುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು/ಸರ್ಕಾರಿ ಪಾಲಿಟೆಕ್ನಿಕ್/ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ/ಜಿಆರ್‌ಐಸಿಪಿ/ಎಸ್‌ಆರ್‌ಸಿಬಿಎಂ ಪ್ರಿನ್ಸಿಪಾಲರುಗಳಿಗೆ ಈ ಮೂಲಕ ತಮ್ಮ ಗಮನಕ್ಕೆ ತರಬಯಸುವುದೇನೆಂದರೆ ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಟೆಂಡರ್ ಕರೆದು ಭದ್ರತಾ ಸಿಬ್ಬಂದಿ ಸೇವೆ ಪಡೆಯಲು ಆಯುಕ್ತಾಲಯಕ್ಕೆ ಪ್ರಸ್ತಾವನೆ ಸಲ್ಲಿಸಿ ಈಗಾಗಲೇ ಆಯುಕ್ತಾಲಯದಿಂದ ಅನುಮೋದನೆ ಪಡೆದುಕೊಂಡ ಟೆಂಡರ್‌ಗಳು ಹಾಗೂ ಪ್ರಸ್ತುತ ಚಾಲ್ತಿಯಲ್ಲಿರುವ ಟೆಂಡರ್‌ಗಳಿಗೆ ಸಂಬಂಧಿಸಿದಂತೆ ಟೆಂಡರ್ ದಸ್ತಾವೇಜಿನಲ್ಲಿ ಟೆಂಡರ್ ಅನುಮೋದನೆಗೆ ನಿಗಧಿಪಡಿಸಿರುವ ಕಾಲಾವಕಾಶವು ಪೂರ್ಣಗೊಂಡಿದ್ದಲ್ಲಿ ಅಂತಹ ಟೆಂಡರ್‌ಗಳನ್ನು ರದ್ದುಪಡಿಸಿ, ಇ.ಎಂ.ಡಿಯನ್ನು (Earnest Money deposit)ನ್ನು ಟೆಂಡರ್‌ನಲ್ಲಿ ಭಾಗವಹಿಸಿರುವ ಭದ್ರತಾ ಸಿಬ್ಬಂದಿಯ ಏಜೆನ್ಸಿಗಳಿಗೆ ಕೂಡಲೇ ದಿನಾಂಕ:22.10.2020ರೊಳಗೆ ಹಿಂತಿರುಗಿಸಲು ಸೂಚಿಸಿದೆ ಹಾಗೂ ವರದಿಯನ್ನು ಆಯುಕ್ತಾಲಯಕ್ಕೆ ಸಲ್ಲಿಸಲು ಸೂಚಿಸಲಾಗಿದೆ.

ಇನ್ನು ಮುಂದೆ ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಭದ್ರತಾ ಸಿಬ್ಬಂದಿ ಸೇವೆ ಪಡೆಯಲಿಚ್ಛಿಸುವ ಸಂಸ್ಥೆಗಳು ಆಯುಕ್ತಾಲಯದ ಯೋಜನಾ ವಿಭಾಗದಿಂದ ಭದ್ರತಾ ಸಿಬ್ಬಂದಿಗಳ ಸಂಖ್ಯೆ ಹಾಗೂ ಇದಕ್ಕೆ ಅವಶ್ಯಕವಿರುವ ಅನುದಾನವನ್ನು ಕೋರಿ ಪ್ರಸ್ತಾವನೆ ಸಲ್ಲಿಸಿ ಅನುಮೋದನೆ ಪಡೆದುಕೊಂಡ ನಂತರ ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಟೆಂಡರ್ ಕರೆದು ಆಯುಕ್ತಾಲಯಕ್ಕೆ ಪ್ರಸ್ತಾವನೆ ಸಲ್ಲಿಸಲು ಸೂಚಿಸಿದೆ.

ಆಡಳಿತಾಧಿಕಾರಿ

**ಇವರಿಗೆ,**

1. ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿನದ ಎಲ್ಲಾ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು ಮತ್ತು ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳ ಪ್ರಾಂಶುಪಾಲರುಗಳ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ಜಂಟಿ ನಿರ್ದೇಶಕರು(ಆ) ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
3. ಇ-ಆಡಳಿತ ವಿಭಾಗ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.(ವೆಬ್ ಸೈಟ್‌ನಲ್ಲಿ ಪ್ರಕಟಿಸಲು)